# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 213 (197) |
| ಸದಸ್ಯರ ಹೆಸರು | ಶ್ರೀ ಟಿ.ಎ. ಶರವಣ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.07.2024 |
| ಉತ್ತರಿಸುವವರು | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಬಡಾವಣೆಗಳೆಷ್ಟು; ಈ ಬಡಾವಣೆಗಳಲ್ಲಿ ಎಷ್ಟು ಆಸ್ತಿಗಳಿಗೆ ನಕಲಿ ದಾಖಲೆ ಸೃಷ್ಟಿಸಿ ಇ-ಖಾತಾ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಕಲಿ ದಾಖಲೆ ನೀಡಿ ಸೃಷ್ಟಿಸಿ ಸೃಜಿಸಿದ ಆಸ್ತಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ಬಡಾವಣೆಗಳನ್ನು ನಿರ್ಮಿಸಿರುವುದಿಲ್ಲ. ನಕಲಿ ದಾಖಲೆ ಸೃಷ್ಟಿಸಿ ಇ-ಖಾತಾ ಮಾಡಿರುವ ಪ್ರಕರಣಗಳು ಯಾವುದೂ ಇರುವುದಿಲ್ಲ. |
| ಆ. | ನಕಲಿ ದಾಖಲೆ ನೀಡಿ ಇ-ಖಾತೆ ಸೃಷ್ಟಿಯಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾದ ನಷ್ಟವೆಷ್ಟು; ನಕಲಿ ದಾಖಲೆ ಸೃಷ್ಟಿಗೆ ಕಾರಣರಾದ ಅಧಿಕಾರಿಗಳು ಯಾರು (ಹೆಸರು ಮತ್ತು ಹುದ್ದೆಯೊಂದಿಗೆ ಮಾಹಿತಿ ನೀಡುವುದು) ಮತ್ತು ಈ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು) | ಅಕ್ರಮ ಬಡಾವಣೆಗಳು ಇರುವುದಿಲ್ಲವಾದ್ದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುವ ಸಂಭವ ಇರುವುದಿಲ್ಲ. |
| ಇ. | ರಾಜ್ಯದ ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣಗೊಳ್ಳುತ್ತಿರುವ ಅಕ್ರಮ ಬಡಾವಣೆ ನಿವೇಶನ / ಮನೆಗಳಿಗೆ ನೀಡುವ ಇ-ಖಾತೆಗಳ ವಿತರಣೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 07 ಟಿಟಿಪಿ 2017, ದಿನಾಂಕ: 22-03-2017 ರಲ್ಲಿ ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಈಗಾಗಲೇ ನಗರ ಸ್ಥಳೀಯ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿರುತ್ತದೆ. |

ಇ-ಸಂಖ್ಯೆ: ನಅಇ 140 ಜಿಇಎಲ್ 2024 (ಇ)

**(ರಹೀಂಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು